# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:104 RNI NO.KAR KAN/2003/10452:No./PMG/KA/NK/BM/743/24-26 ಶನಿವಾರ ದಿನಾಂಕ: 16-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಕನ್ನಡ ಭಾಷೆ ನಾಮಫಲಕಗಳ ಅಳವಡಿಕೆಗೆ ಸೂಚನೆ

ಕೊಪ್ಪಳ, ಮಾರ್ಚ್ 15 : ಭಾಗ್ಯನಗರ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆ ನಾಮಫಲಕಗಳನ್ನು ಬಳಸಬೇಕು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ – 2024ರ ಪ್ರಕಾರ ಭಾಗ್ಯನಗರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾಣಿಜ್ಯ ಮಳಿಗೆಗಳ ಮೇಲೆ ಪ್ರದರ್ಶಿಸುವ ನಾಮಫಲಕಗಳಲ್ಲಿ ಕನ್ನಡ ಭಾಷೆಯು ಶೇ.60 ರಷ್ಟಿರಬೇಕು ಹಾಗೂ ಕನ್ನಡ ಭಾಷೆಯು ನಾಮಫಲಕದ ಮೇಲ್ಭಾಗದಲ್ಲಿರಬೇಕು. ಮಾಲೀಕರು ದಪ್ಪ ಅಕ್ಷರದಲ್ಲಿ ಕಾಣುವಂತೆ ಕನ್ನಡ ಶಬ್ದಗಳನ್ನು ಬಳಸಿ ಫಲಕವನ್ನು ಪ್ರದರ್ಶಿಸುವುದು ಕಡ್ಡಾಯವಾಗಿದೆ. ಈ ನಿಯಮ ಉಲ್ಲಂಘಿಸಿದ್ದು ಕಂಡು ಬಂದರೆ ಉದ್ಯಮ ಪರವಾನಗೆಯನ್ನು ರದ್ದುಪಡಿಸಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಪಟ್ಟಣ ಪಂಚಾಯತ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಭಾಗ್ಯನಗರ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಕೊಪ್ಪಳದಲ್ಲಿ ಗ್ರಾಹಕರ ಕುಂದು ಕೊರತೆಗಳ ಸಭೆ

ಕೊಪ್ಪಳ ಮಾರ್ಚ್ 15 : ಕೊಪ್ಪಳ ಜೆಸ್ಕಾಂನಿಂದ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆಯನ್ನು ಮಾರ್ಚ್ 16 ರಂದು ಬೆಳಗ್ಗೆ 11 ಗಂಟೆಗೆ ನಗರದ ಕಾರ್ಯ ಮತ್ತು ಪಾಲನಾ ವಿಭಾಗ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಕೊಪ್ಪಳ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ಬಳಕೆ ಗ್ರಾಹಕರು ಈ ಸಭೆಗೆ ಹಾಜರಾಗಬೇಕು ಎಂದು ಕೊಪ್ಪಳ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತೀಯರ ಖಾತೆಗೆ 15 ಲಕ್ಷ ಇರಲಿ, 15 ಪೈಸೆಯೂ ಹಾಕಲಿಲ್ಲವಲ್ಲ ಏಕೆ ಮೋದಿಯವರೇ ಸಿ.ಎಂ. ಪ್ರಶ್ನೆ



ಮೈಸೂರು ಮಾ 15: ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಐದು ಕೋಟಿ ಫಲಾನುಭವಿಗಳನ್ನು ಅವಮಾನಿಸಬೇಡಿ. ಗ್ಯಾರಂಟಿಗಳು ಕನ್ನಡ ನಾಡಿನ ಜನತೆಯ ಹಕ್ಕು ಎಂದು ಬಿಜೆಪಿ ನಾಯಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ಆಯೋಜಿಸಿದ್ದ ಚಾರಿತ್ರಿಕ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ಬೆಲೆ ಏರಿಕೆಯ ಬೆಂಕಿಯಲ್ಲಿ ಬಿದ್ದವರ ನೆರವಿಗಾಗಿ ಗ್ಯಾರಂಟಿ ಯೋಜನೆ ಘೋಷಿಸಿದ್ದೂ ಆಯ್ತು, ಜಾರಿ ಮಾಡಿದ್ದೂ ಆಯ್ತು ಎಂದು ನುಡಿದರು. ನಮ್ಮ ಗ್ಯಾರಂಟಿಗಳು ಬಿಜೆಪಿಯವರ ಮನೆ ಬಾಗಿಲಿಗೂ ಮುಟ್ಟಿದೆ. ಬಿಜೆಪಿಯ ಮತದಾರರೂ ಕಾಂಗ್ರೆಸ್ ಗ್ಯಾರಂಟಿಗಳ ಫಲಾನುಭವಿಗಳಾಗಿದ್ದಾರೆ. ಇವರನ್ನು ಅವಮಾನಿಸಬೇಡಿ. ನಮ್ಮ ಗ್ಯಾರಂಟಿಗಳು ನಾಡಿನ ಜನರ ಹಕ್ಕು ಎಂದು ಪುನರುಚ್ಚರಿಸಿ ಬಿಜೆಪಿ ನಾಯಕರಿಗೆ ತಿವಿದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಜಾರಿಯೇ ಆಗಲ್ಲ ಎಂದು ನರೇಂದ್ರ ಮೋದಿ, ಬೊಮ್ಮಾಯಿ, ಆರ್.ಅಶೋಕ್, ವಿಜಯೇಂದ್ರ ಎಲ್ಲರೂ ಸುಳ್ಳಿನ ಮೇಲೆ ಸುಳ್ಳು ಹೇಳಿದರು. ನಾವು ಐದಕ್ಕೆ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಆಗ ಹೊಸ ಸುಳ್ಳು ಹಬ್ಬಿಸಿದರು. ಗ್ಯಾರಂಟಿಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದರು. ಆದರೆ ನಾವು ಬಜೆಟ್ ನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಹೊರತಾದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಹಣ ಮೀಸಲಿಟ್ಟೆವು. ಹೀಗಾಗಿ ಬಿಜೆಪಿಯ ಈ ಮಾತು ಕೂಡ ಸುಳ್ಳಾಯಿತು. ಹೀಗೆ ಬಿಜೆಪಿಮಂದಿ ಮೊದಲಿಗೆ ನಮ್ಮ ಗ್ಯಾರಂಟಿಗಳನ್ನು ಆಡಿಕೊಂಡು, ಸುಳ್ಳು ಹೇಳಿದರು. ಆದರೆ ನಮ್ಮ ಗ್ಯಾರಂಟಿಗಳು ಯಶಸ್ವಿ ಜಾರಿ ಆದ ಬಳಿಕ ನಮ್ಮದೇ ಗ್ಯಾರಂಟಿ ಸ್ಕೀಂಗಳನ್ನು ಕದ್ದು ಅದಕ್ಕೆ ಮೋದಿ ಗ್ಯಾರಂಟಿ ಎಂದು ಹೆಸರಿಟ್ಟಿದ್ದಾರೆ ಎಂದು ಟೀಕಿಸಿದರು.

ನಾವು ನುಡಿದಂತೆ ನಡೆದಿದ್ದೇವೆ: ಬಿಜೆಪಿ ಸುಳ್ಳುಗಳನ್ನೇ ನುಡಿದಿದ್ದಾರೆ (2 ನೇ ಪುಟಕ್ಕೆ)

## ಇಂದು ಲೋಕಸಭಾ ಚುನಾವಣೆ ದಿನಾಂಕ ಘೋಷಣೆ

ಬೆಳಗಾವಿ: ಇಂದು ಮಧ್ಯಾಹ್ನ 3 ಗಂಟೆಗೆ ಚುನಾವಣಾ ಆಯೋಗ ಲೋಕಸಭಾ ಚುನಾವಣೆ ದಿನಾಂಕ ಘೋಷಣೆ ಮಾಡಲಿದೆ ಅಂತ ತಿಳಿದು ಬಂದಿದೆ. ಲೋಕಸಭಾ ಚುನಾವಣೆಯ ವೇಳಾಪಟ್ಟಿಯನ್ನು ಚುನಾವಣಾ ಆಯೋಗ ನಾಳೆ ಮಧ್ಯಾಹ್ನ 3 ಗಂಟೆಗೆ ಪ್ರಕಟಿಸಲಿದೆ. ಈ ಪ್ರಕಟಣೆಯನ್ನು ಇಸಿಐನ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ನೇರ ಪ್ರಸಾರ ಮಾಡಲಾಗುತ್ತದೆ. 2024 ರ ಸಾರ್ವತ್ರಿಕ ಚುನಾವಣೆ ಮತ್ತು ಕೆಲವು ರಾಜ್ಯ ವಿಧಾನಸಭೆಗಳ ವೇಳಾಪಟ್ಟಿಯನ್ನು ಪ್ರಕಟಿಸಲು ಚುನಾವಣಾ ಆಯೋಗವು ಮಾರ್ಚ್ 16 ರಂದು ಮಧ್ಯಾಹ್ನ 3 ಗಂಟೆಗೆ ಪತ್ರಿಕಾಗೋಷ್ಠಿ ನಡೆಸಲಿದೆ. ಇದನ್ನು ಇಸಿಐನ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ನೇರ ಪ್ರಸಾರ ಮಾಡಲಾಗುತ್ತದೆ ಅಂತ ಇಸಿಐ ತಿಳಿಸಿದೆ.ಲೋಕಸಭಾ ಚುನಾವಣೆ ಜೊತೆಗೆ ಈ ನಾಲ್ಕು ರಾಜ್ಯಗಳಾದ ಆಂಧ್ರಪ್ರದೇಶ, ಸಿಕ್ಕಿಂ, ಒಡಿಶಾ, ಅರುಣಾಚಲಪ್ರದೇಶ ರಾಜ್ಯಗಳ ಚುನಾವಣೆಯ ದಿನಾಂಕ ಘೋಷಣೆ ಮಾಡುವ ಸಾಧ್ಯತೆ ಇದೆ. ಕಳೆದ ಬಾರಿ 7 ಹಂತಗಳಲ್ಲಿ ಚುನಾವಣೆ ನಡೆದಿತ್ತು : 2019 ರಲ್ಲಿ ಲೋಕಸಭಾ ಚುನಾವಣೆ ಏಳು ಹಂತಗಳಲ್ಲಿ ನಡೆಯಿತು. ಕಳೆದ ಬಾರಿ ಮಾರ್ಚ್ 10ರಂದು ಚುನಾವಣಾ ಆಯೋಗ ಚುನಾವಣಾ ದಿನಾಂಕವನ್ನು ಘೋಷಿಸಿತ್ತು. ಏಪ್ರಿಲ್ 11 ರಂದು ಮೊದಲ ಹಂತದ ಮತದಾನ ನಡೆದಿದ್ದರೆ, ಮೇ 19 ರಂದು ಕೊನೆಯ ಹಂತದ ಮತದಾನ ನಡೆದಿತ್ತು. ಮೇ 23ರಂದು ಫಲಿತಾಂಶ ಹೊರಬಿದ್ದಿತ್ತು. ಆ ಚುನಾವಣೆಯ ಸಮಯದಲ್ಲಿ, ದೇಶದಲ್ಲಿ 91 ಕೋಟಿಗೂ ಹೆಚ್ಚು ಮತದಾರರಿದ್ದರು, ಅದರಲ್ಲಿ 67 ಪ್ರತಿಶತದಷ್ಟು ಜನರು ಮತ ಚಲಾಯಿಸಿದ್ದರು.

2019 ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ 2014 ಕ್ಕಿಂತ ದೊಡ್ಡ ಗೆಲುವು ಸಾಧಿಸಿತ್ತು. 2014 ರಲ್ಲಿ ಬಿಜೆಪಿ 282 ಸ್ಥಾನಗಳನ್ನು ಗೆದ್ದರೆ, 2019 ರಲ್ಲಿ ಅದು 303 ಸ್ಥಾನಗಳನ್ನು ಗೆದ್ದಿದೆ. ಅದೇ ಸಮಯದಲ್ಲಿ, ಎನ್ಡಿಎ 353 ಸ್ಥಾನಗಳನ್ನು ಗೆದ್ದಿತ್ತು. ಬಿಜೆಪಿ ಶೇ.37.7ರಷ್ಟು ಮತಗಳನ್ನು ಪಡೆದರೆ, ಎನ್ಡಿಎ ಶೇ.45ರಷ್ಟು ಮತಗಳನ್ನು ಪಡೆದಿದೆ. ಕಾಂಗ್ರೆಸ್ 52 ಸ್ಥಾನಗಳನ್ನು ಗೆದ್ದಿತ್ತು.

ಪ್ರಧಾನ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಮೂರನೇ ಅವಧಿಗೆ ಅಧಿಕಾರದ ಚುಕ್ಕಾಣಿ ಹಿಡಿಯುವ ನಿರೀಕ್ಷೆಯಲ್ಲಿದೆ ನಾಳೆ ಯಾವುದೇ ಹೊಸ ನೀತಿ ನಿರ್ಧಾರಗಳನ್ನು ಘೋಷಿಸದಂತೆ ಅಧಿಕಾರದಲ್ಲಿರುವ ಸರ್ಕಾರವನ್ನು ನಿರ್ಬಂಧಿಸುವ ಮಾದರಿ ನೀತಿ ಸಂಹಿತೆ, ಘೋಷಣೆಯಾದ ತಕ್ಷಣ ಜಾರಿಗೆ ಬರುತ್ತದೆ.

## ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ

ಬೆಳಗಾವಿ,ಮಾ.15 – ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ), ಕಾರ್ಯ ಮತ್ತು ಪಾಲನ ನಗರ ಉಪವಿಭಾಗ-3, ಹುವಿಸಕಂನಿ ಬೆಳಗಾವಿರವರ ಅಧಯಕ್ಷತೆಯಲ್ಲಿ ಮಾ.16ರಂದು ಬೆಳಿಗ್ಗೆ 10.30 ಗಂಟೆಗೆ ಹೆಸ್ಕಾಂ ಉಪವಿಭಾಗ-3 ರ ನೆಹರು ನಗರ ಕಛೇರಿಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ ಆಯೋಜಿಸಲಾಗಿದೆ.

ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆ ಅಥವಾ ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ ಎಂದು ಬೆಳಗಾವಿಯ ಕಾರ್ಯ ಮತ್ತು ಪಾಲನ ನಗರ ಉಪ ವಿಭಾಗ-03, ಹುವಿಸಕಂನಿ, ಸಹಾಯಕ ಕಾರ್ಯನಿರ್ವಾಹರ ಇಂಜಿನೀಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಹಕರನ್ನು ಸಬಲೀಕರಣಗೊಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ : ವಿಜಯಕುಮಾರ್ ಹೊನಕೇರಿ



ಬೆಳಗಾವಿ,ಮಾ.15-: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅನೇಕ ಆಮಿಷಗಳಿಗೆ ಒಳಗಾಗಿ ಗ್ರಾಹಕರು ಮೋಸಹೋಗುತ್ತಿದ್ದಾರೆ. ಗ್ರಾಹಕರ ಕಾನೂನಿನ ಕುರಿತು ಪ್ರತಿಯೊಬ್ಬರಲ್ಲಿ ಜಾಗೃತಿ ಮೂಡಿಸಿ ಗ್ರಾಹಕರನ್ನು ಸಬಲೀಕರಣ ಗೊಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ (ಡಿ.ಸಿ.ಐ.ಸಿ) ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಹಾಗೂ ಇತರೆ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ (ಮಾ.15) ಕನ್ನಡ ಸಾಹಿತ್ಯ ಭವನದಲ್ಲಿ ನಡೆದ ವಿಶ್ವ ಗ್ರಾಹಕರ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಹಕರು ತಮ್ಮ ಹಕ್ಕುಗಳ ಮತ್ತು ಜವಾಬ್ದಾರಿಯ ಬಗ್ಗೆ ತಿಳಿದುಕೊಂಡು ಎಚ್ಚೆತ್ತುಕೊಳ್ಳಬೇಕು. ಮೋಸ ಹೋಗುವರು ಇರುವತನಕ ಮೋಸ ಮಾಡುವವರು ಇರುತ್ತಾರೆ. ಗ್ರಾಹಕರನ್ನು ವಂಚನೆ ಮಾಡುವ ಮನೋಭಾವ ಬಿಟ್ಟು ಉತ್ತಮ ಮತ್ತು ಯೋಗ್ಯವಾದ ಸೇವೆಯನ್ನು ನೀಡುವ ಕಾರ್ಯ ಮಾಡಬೇಕಾಗಿದೆ. ಅಲ್ಲದೇ ಗ್ರಾಹಕರ ಹಕ್ಕುಗಳ ಕುರಿತು ವ್ಯಾಪಕ ಪ್ರಚಾರ ಕೈಗೊಂಡು ಗ್ರಾಹಕರ ಹಕ್ಕುಗಳ ಸಂರಕ್ಷಣೆಗೆ ಮುಂದಾಗುವ ಕಾರ್ಯವಾಗಬೇಕಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿಗಳಾದ ಪಿ. ಮುರಳಿಮೋಹನ ರೆಡ್ಡಿ ಅವರು ಮಾತನಾಡಿ, ಕೃತಕ ಬುದ್ಧಿಮತ್ತೆಯ ಅನೇಕ ಜಾಹೀರಾತುಗಳು ಗ್ರಾಹಕರನ್ನು ಬಹುಬೇಗ ತನ್ನತ್ತ ಸೆಳೆದುಕೊಳ್ಳುತ್ತವೆ. ಜಾಹೀರಾತುಗಳ ರೂಪ ವಿನ್ಯಾಸ ನೋಡಿ ಗ್ರಾಹಕರ ಸೆಳೆದು ಮೋಸದ ಜಾಲದಲ್ಲಿ ಸಿಲುಕಿಸುವ ಜಾಲಗಳಿದ್ದು ಗ್ರಾಹಕರು ಈ ಕುರಿತು ಜಾಗೃತಿರಾಗಿರಬೇಕು.

ಗ್ರಾಹಕರು ಖರೀದಿ ಮಾಡುವ ಮೊದಲು ಹೆಚ್ಚು ಜಾಗೃತರಾಗಿರಬೇಕು. ಅದರಲ್ಲೂ ಆನ್ಲೈನ್ ಮೂಲಕ ವ್ಯವಹರಿಸುವಾಗ ಹೆಚ್ಚಿನ ಜಾಗೃತೆಯಿಂದ ವ್ಯವಹರಿಸಬೇಕಾಗಿದೆ. ಗ್ರಾಹಕರಿಗಾಗಿ ಗ್ರಾಹಕರಿಗೋಸ್ಕರ ಸಾಕಷ್ಟು ಕಾನೂನುಗಳಿದ್ದು ಇವುಗಳ ಅರಿವು ಹೊಂದುವದರ ಮೂಲಕ ಮೋಸ ಹೋಗುವದನ್ನು ತಡೆಗಟ್ಟಬಹುದಾಗಿದೆ ಎಂದರು.

ಜಿಲ್ಲಾ ಗ್ರಾಹಕರ ಸಂಘದ ಅಧ್ಯಕ್ಷ ಹಾಗೂ ನ್ಯಾಯವಾದಿಗಳಾದ ಎನ್ ಆರ್ ಲಾತೂರ್ ಅವರು ಮಾತನಾಡಿ, ಇಂದು ನಾವು ಆಧುನಿಕ ಯುಗದಲ್ಲಿ ಇದ್ದೇವೆ. ಪ್ರತಿಯೊಂದು ಕಾರ್ಯವು ಮೊಬೈಲ್ ನಿಂದಲೇ ಆಗುತ್ತಿದೆ. ಅದ್ರಲ್ಲೂ ಸಾಕಷ್ಟು ವ್ಯವಹಾರಗಳು ಮೊಬೈಲ್ ಮೂಲಕ ನಡೆಯುತ್ತಿವೆ. ಗ್ರಾಹಕರು ತಮಗೆ ಬೇಕಾದ ವಸ್ತುಗಳನ್ನು ಆನ್ಲೈನ್ ಮೂಲಕ ಖರೀದಿ ಮಾಡುವುದರಿಂದ ಹೆಚ್ಚು ಮೋಸ ಹೋಗುತ್ತಿದ್ದು, ಸಾರ್ವಜನಿಕರಲ್ಲಿ ಗ್ರಾಹಕರ ಹಕ್ಕು ಹಾಗೂ ಕಾನೂನಿನ ಅರಿವು ಮೂಡಿಸಬೇಕು ಎಂದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಅಣ್ಣಾಸಾಹೇಬ ಸದಲಗೆ ಅವರು ಮಾತನಾಡಿ, ಗ್ರಾಹಕರ ಹಕ್ಕುಗಳ ಮಹತ್ವವನ್ನು ಸಾರುವ ನಿಟ್ಟಿನಲ್ಲಿ, ಪ್ರತಿ ವರ್ಷವೂ ಮಾರ್ಚ್ 15 ರಂದು ವಿಶ್ವ ಗ್ರಾಹಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಗ್ರಾಹಕರಿಗೆ ತಮ್ಮ ಹಕ್ಕುಗಳ ಬಗ್ಗೆ ಅರಿವು ಮೂಡಿಸುವ ಕಾರ್ಯ ಕೇವಲ ಗ್ರಾಹಕರ ದಿನಕ್ಕೆ ಮಾತ್ರ ಸೀಮಿತವಾಗಬಾರದು. ಗ್ರಾಹಕ ಸಂರಕ್ಷಣಾ ಕಾಯಿದೆ 2019 ಗ್ರಾಹಕರ ದೂರುಗಳ ಪರಿಹಾರಕ್ಕಾಗಿ ಕಾರ್ಯ ನಿರ್ವಹಿಸುತ್ತದೆ. (2 ನೇ ಪುಟಕ್ಕೆ)

## ಬಿಜೆಪಿಯಲ್ಲಿನ ಕುಟುಂಬ ರಾಜಕಾರಣದ ವಿರುದ್ಧವೂ ಧ್ವನಿ ಎತ್ತುವ ಧೈರ್ಯ ಬ್ಯಾನರ್ ಹಚ್ಚಿದ ನಿಷ್ಠಾವಂತ ಬಿಜೆಪಿ ಕಾರ್ಯಕರ್ತರು ಮಾಡುವರೇ?

ಬೆಳಗಾವಿ.: ಕುಟುಂಬ ರಾಜಕಾರಣ ಹಾಗೂ ಭ್ರಷ್ಟಾಚಾರ ವಿರೋಧಿ ಮಾಡುವ ಬಿಜೆಪಿ ಹೈಕಮಾಂಡ್ ಮಾಜಿ ಸಿಎಂ ಯಡಿಯೂರಪ್ಪ, ಬೆಳಗಾವಿ ಲೋಕಸಭಾ ಉಪ ಚುನಾವಣೆಯಲ್ಲಿ ಅಂಗಡಿ ಕುಟುಂಬಕ್ಕೆ



ವಿರೋಧ ಇದ್ದರೂ ಬ್ಯಾನರ್ ಅಳವಡಿಸದ ಬಿಜೆಪಿ ಮುಖಂಡರು. ಈಗ ಕಾಂಗ್ರೆಸ್ ವಿರುದ್ಧ ಬ್ಯಾನರ್ ಅಳವಡಿಕೆಯ ನೈತಿಕತೆ ಇದೆಯೇ ಎನ್ನುವ ಪ್ರಶ್ನೆ ಬಿಜೆಪಿಗರೇ ಪ್ರಶ್ನೆ ಮಾಡುತ್ತಿದ್ದಾರೆ

ಬೆಳಗಾವಿ ತಾಲೂಕಿನ ಬಿಜೆಪಿ ಶಾಸಕನ ಮೇಲೆ ಭ್ರಷ್ಟಾಚಾರ ಆರೋಪ ಇದ್ದರೂ ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ನೀಡಿತ್ತು. ಅಲ್ಲದೆ ಬೆಳಗಾವಿ ಲೋಕಸಭಾ ಉಪಚುನಾವಣೆಯಲ್ಲಿ ದಿ.ಸುರೇಶ ಅಂಗಡಿ ಕುಟುಂಬಕ್ಕೆ ವಿರೋಧ ಇದ್ದರೂ ಪ್ರತಿಭಟಿಸದ ಬಿಜೆಪಿಗರು ಈಗ ಕಾಂಗ್ರೆಸ್ ನಾಯಕರ ಬಗ್ಗೆ ಚಕಾರ್ ಎತ್ತುವುದು ಎಷ್ಟು ಸರಿ ಎನ್ನುವುದು ಬಿಜೆಪಿಗರೇ ಪ್ರಶ್ನಿಸುತ್ತಿದ್ದಾರೆ

ಕುಟುಂಬ ರಾಜಕಾರ ಖಂಡಿಸಬೇಕಿದ್ದರೆ ಬಿಜೆಪಿಯಲ್ಲಿರುವ ಸಿದ್ದೇಶ್ವರ, ಯಡಿಯೂರಪ್ಪ ಗಮನಕ್ಕೆ ಬರಲಿಲ್ಲವೇ, ಅಥವಾ ಅವರ ಹೆಸರು ಪ್ರಸ್ತಾಪಿಸಲು ಹಿಂಜರಿಯಲು ಏನು ಕಾರಣ ಏನು ಎನ್ನುವ ಪ್ರಶ್ನೆ ಬಿಜೆಪಿ ಕಾರ್ಯಕರ್ತರು ಕೇಳುತ್ತಿದ್ದಾರೆ. ಇದಕ್ಕೆ ಬಿಜೆಪಿ ನಾಯಕರೇ ಉತ್ತರಿಸಬೇಕು ಎನ್ನುವ ಅಭಿಪ್ರಾಯ ಬಿಜೆಪಿ ಕಾರ್ಯಕರ್ತರೇ ಕೇಳುತ್ತಿದ್ದಾರೆ

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

ಬೆಳಗಾವಿ,ಮಾ.15-:ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ. ನಾಗಲಕ್ಷ್ಮೀ ಚೌಧರಿ ಅವರು ಶನಿವಾರ (ಮಾ.16) ಬೆಳಗಾವಿ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಮಾರ್ಚ.16 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳ ಜೊತೆ ಸಭೆ ನಡೆಸಲಿದ್ದಾರೆ ಬಳಿಕ ಮಧ್ಯಾಹ್ನ 3 ಗಂಟೆಗೆ ಕಾರಾಗೃಹಕ್ಕೆ ಭೇಟಿ ನೀಡಿ ಮಹಿಳಾ ಖೈದಿಗಳ ಸುರಕ್ಷತೆಯ ಬಗ್ಗೆ ಮಾಹಿತಿ ಪಡೆಯುವರು. ಅದೇ ರೀತಿಯಲ್ಲಿ ಸಂಜೆ 4.45 ಗಂಟೆಗೆ ಬೆಳಗಾವಿಯ ಫೇರಫೀಲ್ಡ ಮ್ಯಾರಿಯಟ್ ನಲ್ಲಿ ಪ್ರಜಾವಾಣಿ ಮಹಿಳಾ ಸಾಧಕಿಯರು ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.16ರಂದು ಮುನಿರಾಬಾದ್‌ನಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ

ಕೊಪ್ಪಳ ಮಾರ್ಚ್ 15 : ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಮುನಿರಾಬಾದ್ ಕಾರ್ಯ ಮತ್ತು ಪಾಲನಾ ಉಪ ವಿಭಾಗದಿಂದ ವಿದ್ಯುತ್ ಗ್ರಾಹಕರ ಸಂವಾದ ಸಭೆ ಮಾರ್ಚ್ 16ರಂದು ಮುನಿರಾಬಾದ್ ನಲ್ಲಿ ಏರ್ಪಡಿಸಲಾಗಿದೆ. ಮುನಿರಾಬಾದ್ ಜೆಸ್ಕಾಂ ಉಪ ವಿಭಾಗದ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಸಂವಾದ ಸಭೆಯು ಕಾರ್ಯ ಮತ್ತು ಪಾಲನಾ ಉಪ ವಿಭಾಗ ಕಚೇರಿ ಮುನಿರಾಬಾದ್ ನಲ್ಲಿ ಮಾರ್ಚ್ 16ರ ಬೆಳಿಗ್ಗೆ 11ಕ್ಕೆ ನಡೆಯಲಿದ್ದು, ಉಪ ವಿಭಾಗ ವ್ಯಾಪ್ತಿಯ ಎಲ್ಲಾ ವಿದ್ಯುತ್ ಗ್ರಾಹಕರು ಈ ಸಭೆಗೆ ಹಾಜರಾಗಿ ಯಶಸ್ವಿಗೊಳಿಸಬೇಕು ಎಂದು ಗುವಿಸಕಂನಿ ಮುನಿರಾಬಾದ್ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿಯಿಂದ ಜಗದೀಶ್ ಶೆಟ್ಟರ್ ಲೋಕಸಭಾ ಟಿಕೆಟ್ ಫಿಕ್ಸ್ ಕಾರ್ಯಕರ್ತರಲ್ಲಿ ಅಸಮಾಧಾನ ಚರ್ಚೆ

ಬೆಳಗಾವಿ: ಧಾರವಾಡ, ಹಾವೇರಿ ಲೋಕಸಭಾ ಬಿಜೆಪಿ ಟಿಕೆಟ್ ತಪ್ಪಿದ ಹಿನ್ನೆಲೆಯಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಮೇಲೆ ಕಣ್ಣಿಟ್ಟು ಸಾಮಾಜಿಕ ಜಾಲತಾಣದಲ್ಲಿ ಗೋ ಬ್ಯಾಕ್ ಶೆಟ್ಟರ್ ಅಭಿಯಾನ ಆರಂಭಿಸಿದ್ದಾರೆ.

2023ರ ವಿಧಾನ ಸಭಾ ಚುನಾವಣೆಯಲ್ಲಿ ಬೆಳಗಾವಿ ಉತ್ತರ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸೋಲಿಗೆ ಕಾರಣ ಜಗದೀಶ್ ಶೆಟ್ಟರ್. ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಆಸೀಫ್ ಸೇಠ್ ಪರ ಪ್ರಚಾರ ಮಾಡಿ ಈಗ ಹಾವೇರಿ, ಧಾರವಾಡ ಲೋಕಸಭಾ ಬಿಜೆಪಿ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಬೆಳಗಾವಿಗೆ ಬರುತ್ತಿರುವ ಶೆಟ್ಟರ್ ಗೆ ಗೋ ಬ್ಯಾಕ್ ಶೆಟ್ಟರ್ ಎಂಬ ಅಭಿಯಾನ ಪ್ರಾರಂಭವಾಗಿದೆ.

ಉಡುಪಿ, ಚಿಕ್ಕಮಗಳೂರುನಲ್ಲಿಯೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಗೋ ಬ್ಯಾಕ್ ಅಭಿಯಾನ ಆರಂಭಿಸಿದ್ದರು. ಈ ಹಿನ್ನೆಲೆಯಲ್ಲಿ ಅವರಿಗೆ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರಕ್ಕೆ ಬಿಜೆಪಿ ಟಿಕೆಟ್ ನೀಡಿದ್ದರು. ಈಗ ಬೆಳಗಾವಿಯಲ್ಲಿ ಗೋ ಬ್ಯಾಕ್ ಶೆಟ್ಟರ್ ಅಭಿಯಾನ ಸಾಮಾಜಿಕ ಜಾಲತಾಣದಲ್ಲಿ ನೆಟ್ಟಿಗರು ನಡೆಸಿದ್ದಾರೆ.

ಬೆಳಗಾವಿ ಲೋಕಸಭಾ ಕ್ಷೇತ್ರದ ಟಿಕೆಟ್ ಗಾಗಿ ಲಾಬಿ ನಡೆಸಿರುವ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಬೆಳಗಾವಿಗೆ ಬರಬೇಕಿದ್ದ ಅದೇಷ್ಟೋ ಯೋಜನೆಯನ್ನು ಹುಬ್ಬಳ್ಳಿ-ಧಾರವಾಡಕ್ಕೆ ತೆಗೆದುಕೊಂಡು ಹೋದರು.

ತಮ್ಮ ರಾಜಕೀಯ ಅಸ್ತಿತ್ವಕ್ಕಾಗಿ ಬೀಗರಿಗೆ ಟಿಕೆಟ್ ತಪ್ಪಿಸಿ ತಾವು ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ಪಡೆಯುವುದು ಸರಿಯಲ್ಲ. ನಮ್ಮ ಕ್ಷೇತ್ರದ ಅಭ್ಯರ್ಥಿಗಳು ಸಮರ್ಥರಾಗಿದ್ದಾರೆ. ಇಲ್ಲಿನ ಆಕಾಂಕ್ಷಿಗಳಿಗೆಯೇ ಟಿಕೆಟ್ ನೀಡಬೇಕೆಂದು ಸಾಮಾಜಿಕ ಜಾಲತಾಣದಲ್ಲಿ ಶೆಟ್ಟರ್ ವಿರುದ್ಧ ನೆಟ್ಟಿಗರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಅಮಿತ್ ಶಾ ರವರಿಗೆ ಗಡಿ ವಾಸಿಗಳ ನೋವನ್ನು ತಿಳಿಸಲು 101 ಪತ್ರಗಳು

## ಗಡಿ ಭಾಗದಲ್ಲಿ ಕನ್ನಡ ಒತ್ತಾಯ ನಿಲ್ಲಿಸುವಂತೆ ಅಮಿತ್ ಶಾಗೆ ಪತ್ರ

### ಗೃಹ ಸಚಿವಾಲಯ ಕೂಡಲೇ ಮಧ್ಯಪ್ರವೇಶಿಸಿ ಗಡಿ ಪ್ರದೇಶಗಳ ಮೇಲೆ ನಿಗಾ ಇಡಬೇಕು



ಬೆಳಗಾವಿ: ಕರ್ನಾಟಕ ಸರ್ಕಾರ ಗಡಿ ಭೂಮಿಯಲ್ಲಿ ತನ್ನ ಹಕ್ಕನ್ನು ಪ್ರತಿಪಾದಿಸಲು ಪ್ರಯತ್ನಿಸುತ್ತಿದೆ. ಪ್ರಸ್ತುತ, ಕರ್ನಾಟಕ ಸರ್ಕಾರವು ಕನ್ನಡ ಬಲವಂತದ ಅಧಿವೇಶನವನ್ನು ಅಳವಡಿಸಿಕೊಂಡಿದೆ ಮತ್ತು ವ್ಯಾಪಾರ ಸಂಸ್ಥೆಗಳ ಅಂಗಡಿಕಾರರು ಮತ್ತು ಕಾರಖಂಡರ ಸಂಘ ಸಂಸ್ಥೆಗಳ ಮೇಲೆ ಬೋರ್ಡ್ ಅಧಿಕಾರದ ಬದಲಾಗಿ ಇತರ ಭಾಷೆಗಳಿಗೆ 60% ಮತ್ತು 40% ರಷ್ಟು ಕನ್ನಡ ಇರಬೇಕು ಎಂದು ಆದೇಶಿಸಿದೆ. ಹಾಗೂ ಕನ್ನಡಪರ ಸಂಘಟನೆಗಳು ವರ್ತಕರ ವಿರುದ್ಧ ಗರಂ ಆಗುತ್ತಿವೆ.ಮಹಾರಾಷ್ಟ್ರ ಮತ್ತು ಕರ್ನಾಟಕದ ಗಡಿ ಪ್ರದೇಶಗಳಲ್ಲಿ ಶಾಂತಿ ನೆಲೆಸುವ ಸಲುವಾಗಿ ಡಿಸೆಂಬರ್ 2022 ರಲ್ಲಿ ಎರಡೂ ಮುಖ್ಯಮಂತ್ರಿಗಳ ಸಭೆಯನ್ನು ಸಮನ್ವಯಗೊಳಿಸಲು ಪ್ರಯತ್ನಿಸಲಾಯಿತು. ಅದನ್ನು ಉಲ್ಲಂಘಿಸಲಾಗುತ್ತಿದೆ. ಇದಕ್ಕಾಗಿ ಬೆಳಗಾವಿ ಕಾರವಾರ ನಿಪ್ಪಾಣಿ ಬೀದರ್ ಖಾನಾಪುರ, ಬೆಳಗಾವಿ ಖಾನಾಪುರ ಪ್ರದೇಶಗಳಲ್ಲಿ ಬಲವಂತವಾಗಿ ಹೇರುತ್ತಿರುವ ಕನ್ನಡ ಬಲೆಯನ್ನು ಗೃಹ ಇಲಾಖೆ ಮಧ್ಯ ಪ್ರವೇಶಿಸಿ ನಿಲ್ಲಿಸಬೇಕು. ಮರಾಠಿ ಯುವಕರು ಅದೇ ದಿನ ನಿಪಾನಿ ವಿದರ್ಬಲ್ ಕಿ ಆತ್ಮಿ ಸೇರಿದಂತೆ ಹಲವು ತಾಲೂಕುಗಳ ವಿವಿಧ ಸ್ಥಳಗಳಿಗೆ ತೆರಳಿ ಗಡಿ ಸಮಸ್ಯೆಗೆ ಸಂಬಂಧಿಸಿದಂತೆ ಗೃಹ ಸಚಿವ ಅಮಿತ್ ಶಾ ಅವರಿಗೆ 101 ಪತ್ರಗಳನ್ನು ಕಳುಹಿಸಲಿದ್ದಾರೆ.ಈ ಭಾಗದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಲು ಹಾಗೂ ಇಲ್ಲಿನ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಅವಲೋಕಿಸಲು ಕೇಂದ್ರ ಸರ್ಕಾರದಿಂದ ಅಧಿಕಾರಿಯೊಬ್ಬರನ್ನು ನೇಮಿಸಬೇಕು ಎಂದು ಗಡಿ ಭಾಗದ ನಾಗರಿಕರು ಪತ್ರದಲ್ಲಿ ಮನವಿ ಮಾಡಿದ್ದಾರೆ.